# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 360 |
| ಸದಸ್ಯರ ಹೆಸರು | : | ಶ್ರೀ ಪ್ರಕಾಶ್ ಕೆ.ರಾಥೋಡ್ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | 18.07.2024 |
| ಉತ್ತರಿಸುವ ಸಚಿವರು | : | ಗೃಹ ಸಚಿವರು |

| ಪ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ವಿಜಯಪುರ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಭೀಮಾ ನದಿ ತೀರದಲ್ಲಿ ಪದೇ ಪದೇ ಗುಂಡಿನ ಸದ್ದು ಮೊಳಗುತ್ತಿದ್ದು, ಇದರಿಂದ ಸ್ಥಳೀಯ ಜನರು ತುಂಬಾ ಭಯಭೀತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕಳೆದ 5 ವರ್ಷಗಳಿಂದೀಚೆಗೆ ಗುಂಡು ಹಾರಿಸಲಾದ ಯಾವುದೇ ಪ್ರಕರಣಗಳು ವರದಿಯಾಗಿರುವುದಿಲ್ಲ. |
| ಆ) | ಈ ರೀತಿ ಪದೇ ಪದೇ ಗುಂಡಿನ ದಾಳಿ ನಡೆಯುತ್ತಿರುವುದನ್ನು ತಡೆಯಲು ಸರ್ಕಾರ ಶಾಶ್ವತ ಪರಿಹಾರ ಕಂಡು ಹಿಡಿಯುವುದೇ? (ವಿವರ ನೀಡುವುದು) | ➢ ವಿಜಯಪುರ ಜಿಲ್ಲೆಯ ಭೀಮಾ ನದಿ ತೀರದ ಹೆಚ್ಚಿನ ವ್ಯಾಪ್ತಿ ಇಂಡಿ ಉಪ ವಿಭಾಗದ ವ್ಯಾಪ್ತಿಯಲ್ಲಿ ಬರುತ್ತಿದ್ದು, ಇಂಡಿ ಉಪವಿಭಾಗದ ವ್ಯಾಪ್ತಿಯಲ್ಲಿ ಅಕ್ರಮ ಚಟುವಟಿಕೆಯಲ್ಲಿ/ ಅಪರಾಧ ಪ್ರಕರಣಗಳಲ್ಲಿ ಭಾಗಿಯಾಗುತ್ತಿರುವ ಆರೋಪಿತರ ಮೇಲೆ ಸೂಕ್ತ ಕಾನೂನಿನ ಅಡಿ ಪ್ರಕರಣಗಳನ್ನು ದಾಖಲಿಸಿ ಕಾನೂನು ಕ್ರಮ ಜರುಗಿಸಲಾಗುತ್ತಿದೆ.<br>➢ ಪದೇ ಪದೇ ಅಪರಾಧಿಕ ಕೃತ್ಯಗಳಲ್ಲಿ ತೊಡಗಿರುವವರನ್ನು ಗುರುತಿಸಿ, ಅಂತಹವರ ಮೇಲೆ ರೌಡಿ ಶೀಟ್ ತೆರೆಯಲಾಗುತ್ತಿದೆ.<br>➢ ಸಂಘಟಿತ ಅಪರಾಧ ಕೃತ್ಯಗಳಲ್ಲಿ ತೊಡಗಿರುವವರನ್ನು ಗುರುತಿಸಿ, ಅಂತಹವರ ಮೇಲೆ ಗಡಿಪಾರು/ಗೂಂಡಾ ಕಾಯ್ದೆ ಅಡಿ ಕ್ರಮಕೈಗೊಳ್ಳಲಾಗುತ್ತಿದೆ.<br>➢ ಪರವಾನಿಗೆ ಹೊಂದಿರುವ ಲೈಸನ್ಸದಾರರು ಪರವಾನಿಗೆ ನಿಯಮಗಳನ್ನು ಉಲ್ಲಂಘಿಸಿ ಶಸ್ತ್ರಾಸ್ತ್ರ ಕಾಯ್ದೆ ಅಡಿ ಪ್ರಕರಣಗಳಲ್ಲಿ ಭಾಗಿಯಾಗಿದ್ದಲ್ಲಿ, ಅಂತಹವರ ಪರವಾನಿಗೆ ರದ್ದುಗೊಳಿಸಲಾಗುವುದು. |

ಹೆಚ್‌ಡಿ 102 ಕೆಎಎ 2024

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು.